# ಕರ್ನಾಟಕ ವಿಧಾನ ಪರಿಷತ್ತು

## 158ನೇ ಮು.ಅಧಿವೇಶನ

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 835 (928)

ಸದಸ್ಯರ ಹೆಸರು : ಶ್ರೀ. ಸಿ.ಟಿ ರವಿ
(ವಿಧಾನಸಬಾ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 11-03-2026

ಉತ್ತರಿಸುವ ಸಚಿವರು : ಲೋಕೋಪಯೋಗಿ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| 1 | ಬೇಲೂರು - ಹಾಸನ ರಸ್ತೆ ಅಭಿವೃದ್ಧಿಗೆ ಮಂಜೂರಾಗಿರುವ ಅನುದಾನವೆಷ್ಟು; ಈ ರಸ್ತೆ ಕಾಮಗಾರಿಯ ಗುತ್ತಿಗೆಯನ್ನು ಯಾರಿಗೆ ನೀಡಲಾಗಿದೆ. | ರಾಷ್ಟ್ರೀಯ ಹೆದ್ದಾರಿ - 373 ಬೇಲೂರು - ಹಾಸನ ರಸ್ತೆಯನ್ನು ಚತುಷ್ಪಥ ರಸ್ತೆಯನ್ನಾಗಿ ರೂ.698.08 ಕೋಟಿ ಅಂದಾಜು ಮೊತ್ತದಲ್ಲಿ ಭಾರತ ಸರ್ಕಾರದ ರಸ್ತೆ ಮತ್ತು ಸಾರಿಗೆ ಮಂತ್ರಾಲಯದಿಂದ ಕೈಗೊಳ್ಳಲಾಗಿರುತ್ತದೆ. ಸದರಿ ಕಾಮಗಾರಿಯನ್ನು ಗುತ್ತಿಗೆ ಆಧಾರದ ಮೇಲೆ **M/s. Skylark Infra Engineering Pvt, Ltd., Gurgaon, Haryana** ಇವರಿಗೆ ವಹಿಸಿಕೊಡಲಾಗಿರುತ್ತದೆ. |
| 2 | ಕಾಮಗಾರಿಯನ್ನು ಪ್ರಾರಂಭಿಸಿ ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕಾಮಗಾರಿ ಸ್ಥಗಿತಕ್ಕೆ ಕಾರಣಗಳೇನು: | ಸದರಿ ಕಾಮಗಾರಿಯ ವಿಸ್ತೃತ ಯೋಜನಾ ವರದಿಯಲ್ಲಿ ರೂ.116.71 ಕೋಟಿ ಮೊತ್ತವನ್ನು ಭೂಸ್ವಾಧೀನ ಪ್ರಕ್ರಿಯೆಗೆ ನಿಗದಿಪಡಿಸಲಾಗಿತ್ತು. ಪ್ರಸ್ತುತ ಸದರಿ ಭೂಸ್ವಾಧೀನ ವೆಚ್ಚವನ್ನು ರೂ.316.00 ಕೋಟಿಗಳಿಗೆ ಪರಿಷ್ಕೃತ ಗೊಂಡಿರುತ್ತದೆ.<br>ಈ ಹಿನ್ನೆಲೆಯಲ್ಲಿ ಪರಿಷ್ಕೃತ ಅಂದಾಜು ಪಟ್ಟಿಯನ್ನು ತಯಾರಿಸಿ ಕೇಂದ್ರ ಭೂಸಾರಿಗೆ ಮಂತ್ರಾಲಯ, ನವದೆಹಲಿ ಇವರಿಗೆ ಸಲ್ಲಿಸಲಾಗಿತ್ತು. ದಿನಾಂಕ:01.01.2026 ರಂದು ಪರಿಷ್ಕೃತ ಅಂದಾಜು ಪಟ್ಟಿಗೆ ಸಕ್ಷಮ ಪ್ರಾಧಿಕಾರದಿಂದ ಕೆಲವು ಅಂಶಗಳಿಗೆ ಸ್ಪಷ್ಟನೆ ಕೋರಲಾಗಿದ್ದು, ವಿವರಗಳನ್ನು ಸಲ್ಲಿಸಲಾಗಿದ್ದು ಮಂಜೂರಾತಿ ನಿರೀಕ್ಷಿಸಲಾಗಿದೆ. |
| 3 | ಸ್ಥಗಿತಗೊಂಡಿರುವ ಕಾಮಗಾರಿಯನ್ನು ಪುನಃ ಯಾವಾಗ ಪ್ರಾರಂಬಿಸಲಾಗುವುದು; ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು: | ಪರಿಷ್ಕೃತ ಅಂದಾಜು ಪಟ್ಟಿಗೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ದೊರೆತ ನಂತರ ಭೂಮಾಲೀಕರುಗಳಿಗೆ ಭೂಪರಿಹಾರ ಮೊತ್ತವನ್ನು ಪಾವತಿಸಿ ಇಪಿಸಿ ಕರಾರು Article 3 Obligations of Authority 3.1(iii)(a) Not less than 90 % of Encumbrence free length of the required right of way ರನ್ವಯ ಕಾಮಗಾರಿಗೆ ಅವಶ್ಯವಿರುವ ಭೂಮಿಯನ್ನು ಸ್ವಾಧೀನಪಡಿಸಿಕೊಂಡು, 02 ವರ್ಷದ ಕಾಲಮಿತಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು. ಪ್ರಸ್ತುತ ಸದರಿ ರಸ್ತೆಯನ್ನು ಸುಸ್ಥಿತಿಯಲ್ಲಿಡಲು Short Term Maintenance Contract ಅಡಿಯಲ್ಲಿ ಕಾಮಗಾರಿಯನ್ನು ನಿರ್ವಹಿಸಲಾಗುತ್ತಿದೆ. |

| ಕ್ರ ಸಂ | ಪ್ರಶ್ನೆ | ಉತ್ತರ |
| --- | --- | --- |
| 4 | ಬೇಲೂರು – ಚಿಕ್ಕಮಗಳೂರು ರಸ್ತೆ ಅಭಿವೃದ್ಧಿಗೆ ಅನುದಾನ ಮಂಜೂರಾಗಿದೆಯೇ: ಈ ಕಾಮಗಾರಿಗೆ ಡಿ.ಪಿ.ಆರ್ ತಯಾರಿಸಲಾಗಿದೆಯೇ: ಟೆಂಡರ್ ಕರೆಯಲಾಗಿದೆಯೇ: ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು? | ಬೇಲೂರು-ಚಿಕ್ಕಮಗಳೂರು ವರೆಗಿನ ದ್ವಿಪಥ ರಸ್ತೆಯನ್ನು ಚತುಷ್ಪಥ ರಸ್ತೆಯನ್ನಾಗಿ ನಿರ್ಮಿಸುವ ಕಾಮಗಾರಿಗೆ DPR ತಯಾರಿಸಿ ಭೂ ಸಾರಿಗೆ ಮಂತ್ರಾಲಯಕ್ಕೆ ಸಲ್ಲಿಸಲಾಗಿದ್ದು, ಸದರಿ ಪ್ರಸ್ತಾವನೆಯನ್ನು Standing Finance Committee (SFC) ಮುಂದೆ ಮಂಡಿಸಲಾಗಿರುತ್ತದೆ. ಮುಂದುವರೆದು Standing Finance Committee ನಿರ್ದೇಶನದಂತೆ ಅರಣ್ಯ ಇಲಾಖೆಗೆ Way off Charges ಪಾವತಿಸಲು ಅನುಮೋದನೆ ಪಡೆದ ನಂತರ ಕೇಂದ್ರ ಹೆದ್ದಾರಿ ಮಂತ್ರಾಲಯದಿಂದ ಅನುಮೋದನೆಯಾದ ಪಡೆದು ಸದರಿ ಕಾಮಗಾರಿಗೆ ಟೆಂಡರ್ ಕರೆದು ಗುತ್ತಿಗೆದಾರರನ್ನು ನೇಮಿಸಿ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು. |

ಸಂ:ಲೋಇ/236/ಐಎಫ್ಎ/2026 (ಇ-ಕಛೇರಿ)

ಸತೀಶ ಜಾರಕಿಹೊಳಿ
(ಲೋಕೋಪಯೋಗಿ ಇಲಾಖೆ ಸಚಿವರು)